**National**
**Kannada**
**13.06.2026 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಸುಸ್ಥಿರ ಕೃಷಿ, ನಾವೀನ್ಯತೆ, ಸಂಶೋಧನೆಯು ವಿಕಸಿತ ಭಾರತದ ಅಡಿಪಾಯ - ಲೋಕಸಭಾಧ್ಯಕ್ಷ ಓಂ ಬಿರ್ಲಾ ಅಭಿಮತ

೨. ಐದು ದಿನಗಳ ಬ್ರಿಕ್ಸ್ ಕೃಷಿ ಸಮ್ಮೇಳನ ಸಂಪನ್ನ; 'ಇಂದೋರ್ ಘೋಷಣೆ' ಅಂಗೀಕಾರ

೩. ಭಾರತದ ಮುಂದಿನ ಸೇನಾ ಮುಖ್ಯಸ್ಥರಾಗಿ ಲೆಫ್ಟಿನೆಂಟ್ ಜನರಲ್ ಧೀರಜ್ ಸೇಠ್ ನೇಮಕ

೪. ಅಸ್ಸಾಂನಲ್ಲಿ ಐಎಎಫ್ ವಿಮಾನ ಅಪಘಾತ; ಐವರು ವಾಯುಸೇನಾ ಸಿಬ್ಬಂದಿ ಹುತಾತ್ಮ

**<>><><*><><<>**

೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಭಾರತದ ಪ್ರಯಾಣವು ಹಳ್ಳಿಗಳ ಮೂಲಕ ಸಾಗುತ್ತದೆ. ಸುಸ್ಥಿರ ಕೃಷಿ, ನಾವೀನ್ಯತೆ ಮತ್ತು ಸಂಶೋಧನೆಯು ವಿಕಸಿತ ಭಾರತದ ಅಡಿಪಾಯವಾಗಿದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿಂದು 'ವಿಕಿಸಿತ ಭಾರತ @ ೨೦೪೭' ಕುರಿತ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನದ ಉದ್ಘಾಟನಾದ ಅಧಿವೇಶನ ಉದ್ದೇಶಿಸಿ ಮಾತನಾಡಿದ ಅವರು, ಆಧುನಿಕ ತಂತ್ರಜ್ಞಾನದೊಂದಿಗೆ ಸಾಂಪ್ರದಾಯಕ ಜ್ಞಾನದ ಸಮ್ಮಿಲನದಿಂದ ಭಾರತ ಜಾಗತಿಕ ಕೃಷಿ ನಾಯಕನಾಗಿ ಹೊರಹೊಮ್ಮಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಆಹಾರ ಭದ್ರತೆ, ಗ್ರಾಮೀಣ ಸಮೃದ್ಧಿ, ಸಾಮಾಜಿಕ ಸಾಮರಸ್ಯ ಮತ್ತು ಸಮಗ್ರ ಬೆಳವಣಿಗೆಗಳನ್ನು ಖಚಿತಪಡಿಸಿಕೊಳ್ಳಲು ಕೃಷಿ ಅಭಿವೃದ್ಧಿಯ ಭಾರತದ ದೃಷ್ಟಿಕೋನಕ್ಕೆ ಕೇಂದ್ರಬಿಂದುವಾಗಿರುತ್ತದೆ. ಸುಸ್ಥಿರ, ಲಾಭದಾಯಕ ಮತ್ತು ಸ್ಥಿತಿಸ್ಥಾಪಕತ್ವದ ಕೃಷಿ ಪರಿಸರ ವ್ಯವಸ್ಥೆಯನ್ನು ರಕ್ಷಿಸಲು ಆಧುನಿಕ ತಂತ್ರಜ್ಞಾನದೊಂದಿಗೆ ಸಾಂಪ್ರದಾಯಿಕ ಬುದ್ಧಿವಂತಿಕೆಯನ್ನು ಸಂಯೋಜಿಸುವ ಅಗತ್ಯವಿದೆ ಎಂದು ಸಭಾಧ್ಯಕ್ಷ ಓಂ ಬಿರ್ಲಾ ಅಭಿಪ್ರಾಯಪಟ್ಟಿದ್ದಾರೆ.

**<>><><*><><<>**

ಮಧ್ಯಪ್ರದೇಶದ ಇಂದೋರ್‌ನಲ್ಲಿ ನಡೆದ ಐದು ದಿನಗಳ ಬ್ರಿಕ್ಸ್ ಕೃಷಿ ಸಮ್ಮೇಳನ ಇಂದು ಸಮಾರೋಪಗೊಂಡಿತು. ಸಮ್ಮೇಳನದಲ್ಲಿ, 'ಇಂದೋರ್ ಘೋಷಣೆ'ಯನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು. ಆಹಾರ ಭದ್ರತೆ, ರೈತರ ಕಲ್ಯಾಣ, ಹವಾಮಾನ ಸ್ನೇಹಿ ಕೃಷಿ, ಕೃಷಿ ವ್ಯಾಪಾರ ಮತ್ತು ಡಿಜಿಟಲ್ ಕೃಷಿಯ ಕುರಿತು ಪ್ರಮುಖ ನಿರ್ಧಾರಗಳನ್ನು ಘೋಷಣೆ ಒಳಗೊಂಡಿದೆ. ಬ್ರಿಕ್ಸ್ ರಾಷ್ಟ್ರಗಳು ವಿಶ್ವದ ಜನಸಂಖ್ಯೆಯ ಸುಮಾರು ಅರ್ಧದಷ್ಟು ಭಾಗವನ್ನು ಪ್ರತಿನಿಧಿಸುತ್ತವೆ ಮತ್ತು ಜಾಗತಿಕ ಕೃಷಿ ಉತ್ಪಾದನೆಯ ಸುಮಾರು ಶೇಕಡ ೪೨ರಷ್ಟು ಕೊಡುಗೆ ನೀಡುತ್ತವೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು. 'ಇಂದೋರ್ ಘೋಷಣೆ'ಯು ಕೇವಲ ಒಪ್ಪಂದದ ದಾಖಲೆಯಲ್ಲ. ಆದರೆ ಬ್ರಿಕ್ಸ್ ರಾಷ್ಟ್ರಗಳ ಸಾಮೂಹಿಕ ಇಚ್ಛಾಶಕ್ತಿ ಮತ್ತು ಹಂಚಿಕೆಯ ಜವಾಬ್ದಾರಿಯ ಸಂಕೇತವಾಗಿದೆ ಎಂದರು. ಸಮ್ಮೇಳನದಲ್ಲಿ ನಾಲ್ಕು ಹೊಸ ಸಾಂಸ್ಥಿಕ ಉಪಕ್ರಮಗಳನ್ನು ಘೋಷಿಸಲಾಯಿತು.

<>><><*><><<>

ಇದೇ ೩೦ ರಿಂದ ಜಾರಿಗೆ ಬರುವಂತೆ ಲೆಫ್ಟಿನೆಂಟ್ ಜನರಲ್ ಧೀರಜ್ ಸೇಠ್ ಅವರನ್ನು ಮುಂದಿನ ಭಾರತೀಯ ಸೇನಾ ಮುಖ್ಯಸ್ಥರನ್ನಾಗಿ ಕೇಂದ್ರ ಸರ್ಕಾರ ನೇಮಿಸಿದೆ. ಅವರು ಪ್ರಸ್ತುತ ಭಾರತೀಯ ಸೇನೆಯ ಉಪಮುಖ್ಯಸ್ಥರಾಗಿ ಸೇವೆ ಸಲ್ಲಿಸುತ್ತಿದ್ದರೆ, ಪ್ರಸ್ತುತ ಸೇನಾ ಮುಖ್ಯಸ್ಥರಾಗಿರುವ ಜನರಲ್ ಉಪೇಂದ್ರ ದ್ವಿವೇದಿ ಅವರು ಇದೇ ೩೦ ರಂದು ಸೇವೆಯಿಂದ ನಿವೃತ್ತರಾಗಲಿದ್ದಾರೆ. ಲೆಫ್ಟಿನೆಂಟ್ ಜನರಲ್ ಧೀರಜ್ ಸೇಠ್ ಅವರು ಖಡಕ್ವಾಸ್ಲಾದ ರಾಷ್ಟ್ರೀಯ ರಕ್ಷಣಾ ಅಕಾಡೆಮಿ- ಎನ್‌ಡಿಎ ಹಳೆಯ ವಿದ್ಯಾರ್ಥಿಯಾಗಿದ್ದಾರೆ. ೧೯೮೭ ರ ಡಿಸೆಂಬರ್‌ನಲ್ಲಿ ಅವರು ಭಾರತೀಯ ಸೇನೆಗೆ ಸೇರ್ಪಡೆಯಾದರು. ಕಾರ್ಯಾಚರಣೆ, ಕಾರ್ಯತಂತ್ರ, ಸಾಮರ್ಥ್ಯ ಅಭಿವೃದ್ಧಿ, ಸಾಂಸ್ಥಿಕ ಕ್ಷೇತ್ರಗಳಲ್ಲಿ ಅವರು ವ್ಯಾಪಕ ಅನುಭವ ಹೊಂದಿದ್ದು, ಸುಮಾರು ೪ ದಶಕಗಳಿಂದ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದು, ಭಾರತೀಯ ಸೇನೆಯ ಯುದ್ಧ ಪರಿಣಾಮಕಾರಿತ್ವ ಮತ್ತು ದೀರ್ಘಕಾಲಿನ ರೂಪಾಂತರಕ್ಕೆ ಗಮನಾರ್ಹ ಕೊಡುಗೆ ನೀಡಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<>><><*><><<>

ಕೊಲ್ಲಿಯಲ್ಲಿ ತೈಲ ಹಡಗಿನ ಮೇಲೆ ಅಮೆರಿಕ ನೌಕಾಪಡೆ ನಡೆಸಿದ ದಾಳಿಯಲ್ಲಿ ಮೂವರು ಭಾರತೀಯ ನಾವಿಕರು ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಅಮೆರಿಕಕ್ಕೆ ಭಾರತ ತೀವ್ರ ಪ್ರತಿಭಟನೆ ದಾಖಲಿಸಿದೆ. ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು, ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರೊಂದಿಗೆ ಮಾತನಾಡಿ, ವಾಣಿಜ್ಯ ಸಾಗಣೆಯ ವಿರುದ್ಧ ಇಂತಹ ಮಾರಕ ಕ್ರಮಗಳು ಸಮರ್ಥನೀಯವಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಇತ್ತೀಚೆಗೆ ಒಮನ್ ಕರಾವಳಿಯಲ್ಲಿ ಎಂ.ಟಿ.ಸೇಟ್‌ಬೆಲ್ಲೊ ಹಡಗಿನ ಮೇಲೆ ಅಮೆರಿಕ ನಡೆಸಿದ ದಾಳಿಯಲ್ಲಿ ಮೂವರು ಭಾರತೀಯ ನಾವಿಕರು ಮೃತಪಟ್ಟ ಘಟನೆಗೆ ಸಂಬಂಧಿಸಿದಂತೆ ಭಾರತ ತೀಕ್ಷ್ಣ ಪ್ರತಿಕ್ರಿಯೆ ನೀಡಿದೆ.

<>><><*><><<>

ಮೂಲಸೌಕರ್ಯ ಅಭಿವೃದ್ಧಿಯ ಜೊತೆಗೆ ಉದ್ಯೋಗ ಸೃಷ್ಟಿಗೂ ಸಾರಿಗೆ ಸಚಿವಾಲಯ ವಿಶೇಷ ಒತ್ತು ನೀಡುತ್ತಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ನಾಗ್ಪುರದಲ್ಲಿ ಇಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ದೇಶಾದ್ಯಂತ ಚಾಲನಾ ತರಬೇತಿ ಕೇಂದ್ರಗಳನ್ನು ಸ್ಥಾಪಿಸುವ ಕಾರ್ಯವನ್ನು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ಕೈಗೊಂಡಿದೆ ಎಂದು ತಿಳಿಸಿದರು.  ೨೦೨೫ರ ಜನವರಿಯಲ್ಲಿ ಘೋಷಿಸಲಾದ ನೀತಿಯಡಿ ದೇಶಾದ್ಯಂತ ೧ ಸಾವಿರದ ೬೦೦ ಕೇಂದ್ರಗಳನ್ನು ಸ್ಥಾಪಿಸುವ ಉದ್ದೇಶ ಹೊಂದಲಾಗಿದೆ. ಇವುಗಳಲ್ಲಿ ೨೪ ಕೇಂದ್ರಗಳು ಈಗಾಗಲೇ ಕಾರ್ಯಾರಂಭ ಮಾಡಿದ್ದು, ೧೧೨ ಕೇಂದ್ರಗಳ ಸ್ಥಾಪನಾ ಕಾರ್ಯ ಪ್ರಗತಿಯಲ್ಲಿದೆ. ಈ ಕೇಂದ್ರಗಳ ಮೂಲಕ ಇದುವರೆಗೆ ಸುಮಾರು ೧೦ ಲಕ್ಷ ಜನರಿಗೆ ತರಬೇತಿ ನೀಡಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಎಲ್ಲಾ ಕೇಂದ್ರಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸಲು ಆರಂಭಿಸಿದ ಬಳಿಕ ವರ್ಷಕ್ಕೆ ಸುಮಾರು ೧ ಕೋಟಿ ೧೫ ಲಕ್ಷ ಮಂದಿಗೆ ಚಾಲನಾ ತರಬೇತಿ ದೊರೆಯಲಿದ್ದು, ಇದರಿಂದ ಗಣನೀಯ ಪ್ರಮಾಣದ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ಸಚಿವ ನಿತಿನ್ ಗಡ್ಕರಿ ಹೇಳಿದರು. ಕೇಂದ್ರ ಸರ್ಕಾರದ ವಿವಿಧ ಕಲ್ಯಾಣ ಕಾರ್ಯಕ್ರಮಗಳ ಕುರಿತು ಮಾತನಾಡಿದ ಸಚಿವರು, ಕಳೆದ ೧೨ ವರ್ಷಗಳಲ್ಲಿ ಪ್ರಧಾನಮಂತ್ರಿ ಜನಧನ್ ಯೋಜನೆಯಡಿ ೫೮ ಕೋಟಿಗೂ ಹೆಚ್ಚು ಬ್ಯಾಂಕ್ ಖಾತೆಗಳನ್ನು ತೆರೆಯಲಾಗಿದೆ ಎಂದರು.  ಆಯುಷ್ಮಾನ್ ಭಾರತ್ ಯೋಜನೆಯಿಂದ ೬೦ ಕೋಟಿ ನಾಗರಿಕರು ಪ್ರಯೋಜನ ಪಡೆದಿದ್ದು, ಪ್ರಧಾನಮಂತ್ರಿ ಉಜ್ವಲಾ ಯೋಜನೆಯಡಿ ೧೧ ಕೋಟಿ ಎಲ್‌ಪಿಜಿ ಸಂಪರ್ಕಗಳನ್ನು ಒದಗಿಸಲಾಗಿದೆ. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೧೧ ಕೋಟಿ ರೈತರು ವಾರ್ಷಿಕ ಆರ್ಥಿಕ ನೆರವು ಪಡೆಯುತ್ತಿದ್ದಾರೆ ಎಂದರು.

ಪ್ರಧಾನಮಂತ್ರಿ ಮುದ್ರಾ ಯೋಜನೆಯಡಿ ೫೭ ಕೋಟಿ ಫಲಾನುಭವಿಗಳಿಗೆ ಸುಮಾರು ೩೫ ಲಕ್ಷ ಕೋಟಿ ರೂಪಾಯಿ ಸಾಲ ವಿತರಿಸಲಾಗಿದ್ದು, ಸಣ್ಣ ಉದ್ಯಮಿಗಳು ಮತ್ತು ಬೀದಿಬದಿ ವ್ಯಾಪಾರಿಗಳಿಗೆ ಇದರಿಂದ ನೆರವಾಗಿದೆ ಎಂದು ಸಚಿವ ನಿತಿನ್ ಗಡ್ಕರಿ ತಿಳಿಸಿದರು.

<>><><*><><<>

ಅಸ್ಸಾಂನ ಜೋರ್ಹತ್‌ನಲ್ಲಿ ಇಂದು ಬೆಳಗ್ಗೆ ಸಂಭವಿಸಿದ ಎಎನ್-೩೨ ವಿಮಾನ ಅಪಘಾತದಲ್ಲಿ ಐವರು ಐಎಎಫ್ ಸಿಬ್ಬಂದಿ ಹುತಾತ್ಮರಾಗಿದ್ದಾರೆ. ಐಎಎಫ್ ಸ್ಕ್ವಾಡ್ರನ್ ಲೀಡರ್ ಪ್ರಶಾಂತ್ ಸಿಂಗ್, ಫ್ಲೈಟ್ ಲೆಫ್ಟಿನೆಂಟ್ ಶುಭಂ ಕುಮಾರ್, ಸಾರ್ಜೆಂಟ್ ಜಿತೇಂದ್ರ ಶರ್ಮಾ, ಅಗ್ನಿವೀರ ವಾಯು ಖೇಮರಾಮ್ ಕುಮಾವತ್ ಮತ್ತು ಅಗ್ನಿವೀರ ವಾಯು ಡ್ಯಾನಿಶ್ ಆಲಮ್ ಅವರು ಘಟನೆಯಲ್ಲಿ ಪ್ರಾಣಕಳೆದುಕೊಂಡಿದ್ದಾರೆ ಎಂದು ಭಾರತೀಯ ವಾಯು ಪಡೆ ತಿಳಿಸಿದೆ. ಮೃತರ ಕುಟುಂಬಗಳಿಗೆ ಐಎಎಫ್ ಸಂತಾಪ ಸೂಚಿಸಿದ್ದು, ಈ ದುಃಖದ ಸಮಯದಲ್ಲಿ ಅವರೊಂದಿಗೆ ದೃಢವಾಗಿ ನಿಲ್ಲುತ್ತದೆ ಎಂದು ಹೇಳಿದೆ. ಇಂದು ಬೆಳಗ್ಗೆ ನಿಯಮಿತ ಹಾರಾಟದ ಸಮಯದಲ್ಲಿ ಎಎನ್-೩೨ ವಿಮಾನ ಅಪಘಾತಕ್ಕೀಡಾಯಿತು. ಘಟನೆ ಕುರಿತು ತನಿಖೆ ಪ್ರಗತಿಯಲ್ಲಿದೆ ಎಂದು ಐಎಎಫ್ ತಿಳಿಸಿದೆ.

<>><><*><><<>

ಅಸ್ಸಾಂನ ಜೋರ್ಹತ್‌ನಲ್ಲಿ ಸಂಭವಿಸಿದ ಎಎನ್-೩೨ ವಿಮಾನ ಅಪಘಾತದಲ್ಲಿ ಐವರು ವಾಯುಸೇನಾ ಸಿಬ್ಬಂದಿ ಮೃತಪಟ್ಟ ಘಟನೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಸಚಿವರು, ಅವರ ಧೈರ್ಯ ಮತ್ತು ದೇಶ ಸೇವೆ ಸದಾ ಹೆಮ್ಮೆ ಹಾಗೂ ಕೃತಜ್ಞತೆಯಿಂದ ಸ್ಮರಿಸಲ್ಪಡಲಿದೆ. ಈ ದುಃಖದ ಸಂದರ್ಭದಲ್ಲಿ ರಾಷ್ಟ್ರವು ಮೃತರ ಕುಟುಂಬದೊಂದಿಗೆ ದೃಢವಾಗಿ ನಿಂತಿದೆ ಎಂದು ಹೇಳಿದ್ದಾರೆ.

<>><><*><><<>

ಕಳೆದ ೧೨ ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ದೇಶಾದ್ಯಂತ ಶಿಕ್ಷಣ, ಕೌಶಲ್ಯ, ನಾವೀನ್ಯತೆ, ಮತ್ತು ನವೋದ್ಯಮಗಳಂತಹ ನೂತನ ಸಂಸ್ಕೃತಿಯನ್ನು ಪೋಷಿಸಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ಕೈಗೊಂಡ ವಿವಿಧ ನೀತಿಗಳಿಂದಾಗಿ ಭಾರತ ವಿಶ್ವದ ಎರಡನೇ ಅತಿ ದೊಡ್ಡ ಉನ್ನತ ಶಿಕ್ಷಣದ ಜಾಲವನ್ನು ಹೊಂದಿದೆ ಎಂದು ತಿಳಿಸಿದ್ದಾರೆ. ದೇಶದಲ್ಲಿ ೨ ಲಕ್ಷಕ್ಕೂ ಹೆಚ್ಚು ನವೋದ್ಯಮಗಳೊಂದಿಗೆ ಮೂರನೇ ಅತಿ ದೊಡ್ಡ ನವೋದ್ಯಮ ಪರಿಸರ ವ್ಯವಸ್ಥೆಯ ಹೊಂದಿದೆ.

೬೦ ದಶಲಕ್ಷಕ್ಕಿಂತಲೂ ಹೆಚ್ಚು ಯುವಕರಿಗೆ ಕೌಶಲ್ಯಾಭಿವೃದ್ಧಿ ಮೂಲಕ ಅಗಾಧ ಬೆಳವಣಿಗೆ ಸಾಧಿಸಿದೆ. ೧೨೦ ದಶಲಕ್ಷಕ್ಕೂ ಹೆಚ್ಚು ಮುದ್ರಾ ಸಾಲಗಳು ಮತ್ತು ೩೦೦ ಕ್ಕೂ ಬಾಹ್ಯಾಕಾಶ ನವೋದ್ಯಮಗಳು, ಇಂದಿನ ಯುವಕರು, ಉದ್ಯೋಗ ಸೃಷ್ಟಿಕರ್ತರು ಎಂಬುದಕ್ಕೆ ಪುರಾವೆಯಾಗಿ ನಿಂತಿದೆ ಎಂದು ಹೇಳಿದ್ದಾರೆ.

**<>><><*><><<>**

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಖಾತೆ ಸಚಿವ ಡಾ.ಜಿತೇಂದ್ರ ಸಿಂಗ್, ಇಂದು ಬೆಂಗಳೂರಿನಲ್ಲಿ ಆಯೋಜನೆಗೊಂಡಿರುವ "ಸಂಶೋಧನೆ, ಕೈಗಾರಿಕೆ, ನವೋದ್ಯಮ ಮತ್ತು ಉದ್ಯಮಶೀಲತೆ ಸಮಾವೇಶ-ಆರ್‌ಐಎಸ್‌ಇ ದಲ್ಲಿ ವಸ್ತುಪ್ರದರ್ಶನವನ್ನು ಉದ್ಘಾಟಿಸಿದರು. ಬಳಿಕ ಅವರು ಸಮಾವೇಶದಲ್ಲಿ ಪ್ರದರ್ಶಿಸಲಾಗಿದ್ದ ವಿವಿಧ ಉದ್ಯಮಗಳ ನಾವೀನ್ಯ ಆವಿಷ್ಕಾರಗಳನ್ನು ವೀಕ್ಷಿಸಿ, ಸಂಬಂಧಿಸಿದವರಿಂದ ಮಾಹಿತಿ ಪಡೆದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**